ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಧಾರ್ಮಿಕ ಅಲ್ಪ ಸಂಖ್ಯಾತರ ಕೈಗಾರಿಕೆ ತರಬೇತಿ ಸಂಸ್ಥೆ (ಐಟಿಐ) ಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

29 (94) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ, ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ ಕಾಲೇಜು)ಗಳು ಧಾರ್ಮಿಕ ಅಲ್ಪ ಸಂಖ್ಯಾತರ ಕಾಲೇಜುಗಳೆಂದು ಸ್ಥಾನಮಾನ ನೀಡುವಂತೆ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸಿದ್ದರೂ ಸಹ ಈ ಕಾಲೇಜುಗಳಿಗೆ ಧಾರ್ಮಿಕ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಘೋಷಣೆ/ಮಾನ್ಯತೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಆದೇಶಗಳ ಸಹಿತ ವಿವರ ನೀಡುವುದು)

(ಆ) ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ. ಕಾಲೇಜು) ಗಳಿಂದ ಧಾರ್ಮಿಕ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಘೋಷಿಸಲು/ಮಾನ್ಯತೆ ನೀಡುವಂತೆ ಕೋರಿ ಪ್ರಸ್ತಾವನೆಗಳು ಸ್ವೀಕೃತವಾಗಿವೆಯೇ; ಸ್ವೀಕೃತವಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಪ್ರಸ್ತಾವನೆಗಳು ಬಂದಿವೆ; ಈ ಪ್ರಸ್ತಾವನೆಗಳು ಸ್ವೀಕೃತವಾದ ದಿನಾಂಕವೇನು; ಸದರಿ ಪ್ರಸ್ತಾವನೆಗಳು ಯಾವ ಹಂತದಲ್ಲಿವೆ; ಎಷ್ಟು ಪ್ರಸ್ತಾವನೆಗಳಿಗೆ ಧಾರ್ಮಿಕ ಅಲ್ಪ ಸಂಖ್ಯಾತರ ಸಂಸ್ಥೆ ಎಂದು ಘೋಷಿಸಲಾಗಿದೆ; (ಕಾಲೇಜುವಾರು ವಿವರ ನೀಡುವುದು)

(ಇ) ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ. ಕಾಲೇಜು) ಗಳನ್ನು ಧಾರ್ಮಿಕ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಘೋಷಿಸಲು/ಸ್ಥಾನಮಾನ ನೀಡಲು ಬೇಕಾಗಿರುವ ಮಾರ್ಗಸೂಚಿಗಳನ್ನು/ಅಧಿಸೂಚನೆಗಳನ್ನು ಹೊರಡಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾಕೆ ಹೊರಡಿಸಿಲ್ಲ; ಯಾವ ಕಾಲಮಿತಿಯೊಳಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು? (ವಿವರ ನೀಡುವುದು)